# ದಿ ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿಯಮಿತ, ಹಾಸನ.

## ಬಿ.ಎಂ.ರಸ್ತೆ, ಹಾಸನ-573 201.

## ನೇಮಕಾತಿ ಪ್ರಕಟಣೆ

**ಅಧಿಸೂಚನೆ: ಸಂ: ಹೆಚ್‌ಡಿಸಿಸಿಬಿ/ ಆ ಮತ್ತು ಸಿ ವಿಭಾಗ/2207/2018-19 ದಿನಾಂಕ: 05-11-2018**

ಬ್ಯಾಂಕಿನ ನೌಕರರ ಸೇವಾ ನಿಯಮಾವಳಿ ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಸಹಕಾರ ಇಲಾಖೆ ಸಚಿವಾಲಯ ಅಧಿಸೂಚನೆ ಸಂಖ್ಯೆ: ಸಿಒ123 ಸಿಎಲ್‌ಎಂ 2016 ಬೆಂಗಳೂರು ದಿನಾಂಕ 29-07-2017, ಅಧಿಸೂಚನೆ ಸಂಖ್ಯೆ: ಸಿಒ 123 ಸಿಎಲ್‌ಎಂ 2016 ಬೆಂಗಳೂರು ದಿನಾಂಕ 05-03-2018, ಸರ್ಕಾರದ ಆದೇಶ ಸಂಖ್ಯೆ: ಸಿಒ/166/ಸಿಎಲ್‌ಎಂ/2012 ದಿನಾಂಕ 22-08-2013 ಹಾಗೂ ಸಹಕಾರ ಸಂಘಗಳ ನಿಬಂಧಕರ ಆದೇಶ ಸಂಖ್ಯೆ: ಆರ್‌ಸಿಎಸ್/ಸಿಆರ್‌ಡಿ/ಕೆಎಂಸಿ-4/81 2018-19 ದಿನಾಂಕ:31-10-2018 ರನ್ವಯ ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನಲ್ಲಿ ಖಾಲಿಯಿರುವ ವಿವಿಧ ಶ್ರೇಣಿಯ ಹುದ್ದೆಗಳಿಗೆ ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ ಭರ್ತಿ ಮಾಡಲು ಪ್ರಕಟಣೆ ನೀಡಲಾಗಿದೆ.

ಸದರಿ ಹುದ್ದೆಗಳಿಗೆ ಮೀಸಲಾತಿ ನಿಯಮಗಳನ್ವಯ ವರ್ಗೀಕರಣ ಮಾಡಲಾದ ವಿವರ ಈ ಕೆಳಕಂಡಂತಿರುತ್ತದೆ.

| ಕ್ರ. ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ವರ್ಗೀಕರಣ | ಒಳ ಮೀಸಲಾತಿ | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು | ಮಾಜಿ ಸೈನಿಕ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ಒಟ್ಟು |
| 1 | ಕಿರಿಯ ಸಹಾಯಕರು | **54** | ಸಾಮಾನ್ಯ | 6 | 8 | 7 | 2 | 2 | 1 | 1 | 27 |
| | | | ಪರಿಶಿಷ್ಟ ಜಾತಿ | 2 | 3 | 2 | 1 | | | | 08 |
| | | | ಪರಿಶಿಷ್ಟ ಪಂಗಡ | 1 | 1 | | | | | | 02 |
| | | | ಪ್ರ ವರ್ಗ-1 | 1 | 1 | | | | | | 02 |
| | | | ಪ್ರವರ್ಗ-2 ಎ | 2 | 3 | 2 | 1 | | | | 08 |
| | | | ಪ್ರವರ್ಗ-2 ಬಿ | 1 | 1 | | | | | | 02 |
| | | | ಪ್ರವರ್ಗ-3ಎ | 1 | 1 | | | | | | 02 |
| | | | ಪ್ರವರ್ಗ-3ಬಿ | 1 | 1 | 1 | | | | | 03 |
| | | ಒಟ್ಟು | | 15 | 19 | 12 | 4 | 2 | 1 | 1 | 54 |

| | | | | | | | | | | | |
|---|---|---|---|---|---|---|---|---|---|---|---|
| 2 | ಐ.ಟಿ.ಸೂಪರ್ ವೈಸರ್ ಮತ್ತು ಕಂಪ್ಯೂಟರ್ ಅನಾಲಿಸ್ಟ್ | 07 | ಸಾಮಾನ್ಯ | 1 | 1 | 1 | | | | | 03 |
| | | | ಪರಿಶಿಷ್ಟ ಜಾತಿ | 1 | | | | | | | 01 |
| | | | ಪರಿಶಿಷ್ಟ ಪಂಗಡ | 1 | | | | | | | 01 |
| | | | ಪ್ರ ವರ್ಗ-1 | 1 | | | | | | | 01 |
| | | | ಪ್ರವರ್ಗ-2 ಎ | 1 | | | | | | | 01 |
| | | | ಪ್ರವರ್ಗ-2 ಬಿ | | | | | | | | 0 |
| | | | ಪ್ರವರ್ಗ-3ಎ | | | | | | | | 0 |
| | | | ಪ್ರವರ್ಗ-3ಬಿ | | | | | | | | 0 |
| | | ಒಟ್ಟು | | 05 | 01 | 01 | | | | | 07 |
| 3 | ಅಟೆಂಡರ್ | 22 | ಸಾಮಾನ್ಯ | 3 | 3 | 3 | 1 | 1 | | | 11 |
| | | | ಪರಿಶಿಷ್ಟ ಜಾತಿ | 1 | 1 | 1 | | | | | 03 |
| | | | ಪರಿಶಿಷ್ಟ ಪಂಗಡ | 1 | | | | | | | 01 |
| | | | ಪ್ರ ವರ್ಗ-1 | 1 | | | | | | | 01 |
| | | | ಪ್ರವರ್ಗ-2 ಎ | 1 | 1 | 1 | | | | | 03 |
| | | | ಪ್ರವರ್ಗ-2 ಬಿ | 1 | | | | | | | 01 |
| | | | ಪ್ರವರ್ಗ-3ಎ | 1 | | | | | | | 01 |
| | | | ಪ್ರವರ್ಗ-3ಬಿ | 1 | | | | | | | 01 |
| | | ಒಟ್ಟು | | 10 | 05 | 05 | 01 | 01 | | | 22 |
| | ಒಟ್ಟು | 83 | | | | | | | | | |

| ಕ್ರ. ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ | ವಿದ್ಯಾರ್ಹತೆ |
|---|---|---|---|
| 01 | ಕಿರಿಯ ಸಹಾಯಕ | 30350-58250 | 1) ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕನಿಷ್ಟ ಶೇ. 50 ಅಂಕಗಳೊಂದಿಗೆ ಪದವಿ ಪಡೆದಿರಬೇಕು. (ಪದವಿ ಅಂದರೆ 10+2+3 ಆಗಿರುತ್ತದೆ)<br>2) ಕಂಪ್ಯೂಟರ್ ವಿಷಯದಲ್ಲಿ ಡಿಪ್ಲೋಮಾ ಅಥವಾ ಅಧಿಕೃತ ಸಂಸ್ಥೆಗಳಿಂದ ಕಂಪ್ಯೂಟರ್ ಸರ್ಟಿಫಿಕೇಟ್ ಕೋರ್ಸ್ ಮಾಡಿರತಕ್ಕದ್ದು. |

| | | | |
|---|---|---|---|
| 02 | ಐ.ಟಿ.ಸೂಪರ್‌ವೈಸರ್ ಮತ್ತು ಕಂಪ್ಯೂಟರ್ ಅನಾಲಿಸ್ಟ್ | 33450-62600 | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕನಿಷ್ಟ ಶೇ. 50 ಅಂಕಗಳೊಂದಿಗೆ ಇಂಜಿನಿಯರಿಂಗ್ ಪದವಿ (ಕಂಪ್ಯೂಟರ್ ಸೈನ್ಸ್/ಇನ್‌ಫರ್‌ಮೇಷನ್ ಸೈನ್ಸ್/ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್) ಅಥವಾ ಕಂಪ್ಯೂಟರ್ ಸೈನ್ಸ್‌ನ್ನು ಒಂದು ವಿಷಯವನ್ನಾಗಿ ಅಧ್ಯಯನ ಮಾಡಿ ಪದವಿ ಪಡೆದಿರಬೇಕು. {ಬಿ.ಇ./ಬಿ.ಟೆಕ್ (ಕಂಪ್ಯೂಟರ್ ಸೈನ್ಸ್/ಇನ್‌ಫರ್‌ಮೇಷನ್ ಸೈನ್ಸ್/ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್)}/ ಬಿ.ಸಿ.ಎ./ಬಿ.ಎಸ್ಸಿ ಕಂಪ್ಯೂಟರ್ ಸೈನ್ಸ್). |
| 03 | ಅಟೆಂಡರ್ | 23500-47650 | ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು. |

**I ವಯೋಮಿತಿ:**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕಕ್ಕೆ ಕನಿಷ್ಟ 18 ವರ್ಷಗಳು ಹಾಗೂ ಗರಿಷ್ಟ ಸಾಮಾನ್ಯ ವರ್ಗಕ್ಕೆ - 35 ವರ್ಷಗಳು, ಪ್ರವರ್ಗ 2ಎ, 2ಬಿ, 3ಎ, 3ಬಿ - 38 ವರ್ಷಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 – 40 ವರ್ಷಗಳು ಹಾಗೂ ಸರ್ಕಾರಿ ಆದೇಶದ ಅನುಸಾರ ಮಾಜಿ ಸೈನಿಕರು, ಅಂಗವಿಕಲರಿಗೆ, ವಿಧವೆಯರಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

**II ಆಯ್ಕೆ ವಿಧಾನ:**

ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ.

**1) ಕಿರಿಯ ಸಹಾಯಕ ಹುದ್ದೆಗೆ:**

200 ಅಂಕಗಳ ಲಿಖಿತ ಪರೀಕ್ಷೆಯಿದ್ದು, ಕನ್ನಡ ಭಾಷೆಗಾಗಿ- 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ- 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ-25 ಅಂಕಗಳು, ಸಹಕಾರಿ ವಿಷಯಕ್ಕಾಗಿ – 50 ಅಂಕಗಳು, ಭಾರತ ಸಂವಿಧಾನಕ್ಕೆ- 25 ಅಂಕಗಳು ಹಾಗೂ ವಸ್ತುನಿಷ್ಠ ವಿಷಯಗಳಿಗೆ-25 ಅಂಕಗಳು ಒಳಗೊಂಡಿರುತ್ತದೆ.

2) **ಐ.ಟಿ.ಸೂಪರ್ ವೈಸರ್:**

200 ಅಂಕಗಳ ಲಿಖಿತ ಪರೀಕ್ಷೆಯಿದ್ದು, ಕನ್ನಡ ಭಾಷೆಗಾಗಿ- 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ- 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ-25 ಅಂಕಗಳು ಮತ್ತು ಕಂಪ್ಯೂಟರ್ /ಮಾಹಿತಿ ತಂತ್ರಜ್ಞಾನ/ಬ್ಯಾಂಕಿಂಗ್ ತಂತ್ರಜ್ಞಾನ ಪರೀಕ್ಷೆ -75 ಅಂಕಗಳು ಮತ್ತು ಭಾರತ ಸಂವಿಧಾನಕ್ಕೆ -25 ಅಂಕಗಳು ಒಳಗೊಂಡಿರುತ್ತದೆ.

3) **ಅಟೆಂಡರ್ ಹುದ್ದೆಗೆ:**

100 ಅಂಕಗಳ ಲಿಖಿತ ಪರೀಕ್ಷೆಯಿದ್ದು, ಕನ್ನಡ ಭಾಷೆಗಾಗಿ-50 ಅಂಕಗಳು ಮತ್ತು ಸಾಮಾನ್ಯ ಜ್ಞಾನಕ್ಕಾಗಿ-50 ಅಂಕಗಳು ಒಳಗೊಂಡಿರುತ್ತದೆ.

ಲಿಖಿತ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳನ್ನು ಶೇ. 85 ಕ್ಕೆ ಇಳಿಸಿ, ಪಡೆಯಲಾದ ಅಂಕಗಳ ಶೇಕಡಾವಾರು ಆಧಾರದ ಮೇಲೆ 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಉಳಿದ ಪ್ರತಿಶತ 15 ಅಂಕಗಳನ್ನು ಸಂದರ್ಶನದಲ್ಲಿ ನೀಡಲಾಗುವುದು.

**III) ನಿಬಂಧನೆಗಳು:**

1) ಅರ್ಜಿಯನ್ನು ಸಲ್ಲಿಸಬಯಸುವ ಅಭ್ಯರ್ಥಿಗಳು ಪ್ರತಿ ಅರ್ಜಿಗೆ ರೂ. 100-00 + ಜಿಎಸ್‌ಟಿ ಶೇ. 18= ಒಟ್ಟು ರೂ. 118-00 ರಂತೆ ಅರ್ಜಿ ಫೀಯನ್ನು ನಗದಾಗಿ ಪಾವತಿಸಿ ಬ್ಯಾಂಕಿನ ಪ್ರಧಾನ ಕಛೇರಿಯಿಂದ ದಿನಾಂಕ: 09-11-2018 ರಿಂದ ದಿನಾಂಕ: 10-12-2018 ರವರೆಗೆ ಕಛೇರಿ ವೇಳೆಯಲ್ಲಿ ಅರ್ಜಿ ಫಾರಂ ಅನ್ನು ಪಡೆಯತಕ್ಕದ್ದು.

2) ಬ್ಯಾಂಕಿನಿಂದ ಪಡೆದಂತಹ ಅರ್ಜಿಯನ್ನು ಮಾತ್ರ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

3) ಅಭ್ಯರ್ಥಿಗಳು ನಿಗಧಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ತುಂಬಿ ಸಾಮಾನ್ಯ ಮತ್ತು ಇತರೆ ಹಿಂದುಳಿದ ಅಭ್ಯರ್ಥಿಗಳಾದಲ್ಲಿ ರೂ. 500-00 ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳಾದಲ್ಲಿ ರೂ. 250-00 ಗಳನ್ನು "ಮುಖ್ಯಕಾರ್ಯನಿರ್ವಾಹಣಾಧಿಕಾರಿ, ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಹಾಸನ ಇವರ ಹೆಸರಿಗೆ ಬರೆದು ಕ್ರಾಸ್ ಮಾಡಿದ ಡಿಮ್ಯಾಂಡ್ ಡ್ರಾಫ್ಟ್‌ನ್ನು ಹಾಸನದಲ್ಲಿ ಪಾವತಿಯಾಗುವಂತೆ ಪಡೆದು ಅರ್ಜಿ ಜೊತೆ ಲಗತ್ತಿಸಿ ಸಲ್ಲಿಸತಕ್ಕದ್ದು.

4) ಭರ್ತಿ ಮಾಡಿದ ಅರ್ಜಿಯನ್ನು ಮೊಹರು ಲಕೋಟೆಯಲ್ಲಿ ಹುದ್ದೆಗನುಗುಣವಾಗಿ ಪ್ರತ್ಯೇಕವಾಗಿ "ಕಿರಿಯ ಸಹಾಯಕ " "ಐ.ಟಿ.ಸೂಪರ್‌ವೈಸರ್ ಮತ್ತು ಕಂಪ್ಯೂಟರ್ ಅನಾಲಿಸ್ಟ್, ಮತ್ತು "ಅಟೆಂಡರ್" ಹುದ್ದೆಗೆ ಅರ್ಜಿ ಎಂಬುದಾಗಿ ಲಕೋಟೆಯ ಮೇಲೆ ನಮೂದಿಸಿ ಅವಶ್ಯಕ ಪ್ರಮಾಣ ಪತ್ರಗಳ ಧೃಢೀಕೃತ ಪ್ರತಿಗಳ ಸಹಿತ "ಸದಸ್ಯ ಕಾರ್ಯದರ್ಶಿ, ನೇಮಕಾತಿ ಸಮಿತಿ ಹಾಗೂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಪ್ರಧಾನ ಕಛೇರಿ, "ಉನ್ನತಿ" ಬಿ.ಎಂ.ರಸ್ತೆ, ಹಾಸನ-573 201" ಈ ವಿಳಾಸಕ್ಕೆ ದಿನಾಂಕ: **10-12-2018 ರ ಸಂಜೆ 5-00** ಗಂಟೆಯೊಳಗೆ ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮುಖಾಂತರ ಸಲ್ಲಿಸತಕ್ಕದ್ದು. ತದನಂತರ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

5) ಪ್ರಕಟಣೆಯಲ್ಲಿ ಪ್ರಕಟಿಸಿದ ಹುದ್ದೆಗಳಿಗೆ ಸಂಬಂಧಿಸಿದಂತೆ, ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಸರ್ಕಾರದ ವಿವಿಧ ಇಲಾಖೆಗಳು ನೇಮಕಾತಿಗಾಗಿ ನಿಗದಿಪಡಿಸಿರುವ ನಮೂನೆಗಳಲ್ಲಿ ಹಾಗೂ ಚಾಲ್ತಿಯಲ್ಲಿರುವ ಅಗತ್ಯ ಪ್ರಮಾಣ ಪತ್ರಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ಧೃಢೀಕರಿಸಿ ಲಗತ್ತಿಸತಕ್ಕದ್ದು. ಅಭ್ಯರ್ಥಿಗಳು ತಾವು ಕೋರಬಯಸುವ ಮೀಸಲಾತಿಯನ್ನು ಅರ್ಜಿ ಫಾರಂನ ಸಂಬಂಧಪಟ್ಟ ಕಾಲಂನಲ್ಲಿ ಕೋರಿರುವ ಮೀಸಲಾತಿ ಮತ್ತು ಒಳ ಮೀಸಲಾತಿ ವರ್ಗದಲ್ಲಿ ಅಭ್ಯರ್ಥಿಗಳು ಇಚ್ಛಿಸುವ ಆಯ್ಕೆಯನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಮೀಸಲಿರಿಸಿದ ವರ್ಗಗಳಲ್ಲಿ ಸಮತಳ ಮೀಸಲಾತಿಗಳ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಅದೇ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಎ) ಅಂಗವಿಕಲ ಅಭ್ಯರ್ಥಿ:** ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03-09-2005 ರ ಆದೇಶದಲ್ಲಿ ತಿಳಿಸಿರುವಂತೆ ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರಗಳನ್ನು ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 115 ಸೇನೆನಿ 2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರದ ಧೃಡೀಕೃತ ಪ್ರತಿಯನ್ನು ಲಗತ್ತಿಸತಕ್ಕದ್ದು.

**ಬಿ) ಗ್ರಾಮೀಣ ಅಭ್ಯರ್ಥಿ:** ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರವನ್ನು ಶಾಲಾ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದು ಧೃಡೀಕರಿಸಿ ಲಗತ್ತಿಸಿತಕ್ಕದ್ದು ಹಾಗೂ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಕೋರಲು ಇಚ್ಛಿಸಿದಲ್ಲಿ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಪಡೆದು ಧೃಢೀಕರಿಸಿ ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

**ಸಿ) ಕನ್ನಡ ಮಾಧ್ಯಮ ಅಭ್ಯರ್ಥಿ:** ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು ಪ್ರಮಾಣ ಪತ್ರವನ್ನು ಶಾಲಾ ಮುಖ್ಯೋಪಾಧ್ಯಾಯರ ಸಹಿಯೊಂದಿಗೆ ಪಡೆದ ಪ್ರಮಾಣ ಪತ್ರವನ್ನು ಧೃಢೀಕರಿಸಿ ಲಗತ್ತಿಸತಕ್ಕದ್ದು.

**ಡಿ) ಯೋಜನಾ ನಿರಾಶ್ರಿತರು:** ಸರ್ಕಾರದ ಆದೇಶದ ಅನುಸಾರ ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳ ಅನ್ವಯ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇನೆನಿ 2001 ದಿನಾಂಕ 27-07-2001 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಪಡೆದು ಧೃಢೀಕರಿಸಿ ಲಗತ್ತಿಸತಕ್ಕದ್ದು.

**ಇ) ಮಾಜಿ ಸೈನಿಕ ಅಭ್ಯರ್ಥಿ:** ಮಾಜಿ ಸೈನಿಕ ಅಂದರೆ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಇವರು ಸರ್ಕಾರದ ಜಾರಿಯಲ್ಲಿರುವ ನಿಯಮಗಳನ್ವಯ ಮಾಜಿ ಸೈನಿಕ ಅಭ್ಯರ್ಥಿ ಪ್ರಮಾಣ ಪತ್ರವನ್ನು ಪಡೆದು ಧೃಢೀಕರಿಸಿ ಲಗತ್ತಿಸತಕ್ಕದ್ದು.

6) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ದೃಢೀಕರಿಸಿದ ಎಸ್.ಎಸ್.ಎಲ್.ಸಿ ಅಂಕ ಪಟ್ಟಿ ಅಥವಾ ಶಾಲಾ ವರ್ಗಾವಣೆ ಪತ್ರ ಅಥವಾ ಕ್ಯುಮ್ಯೂಲೇಟೀವ್ ರೆಕಾರ್ಡ್ ದೃಢೀಕರಣ ಪತ್ರ ಲಗತ್ತಿಸತಕ್ಕದ್ದು.

7) ವಿದ್ಯಾರ್ಹತೆಗೆ ಸಂಬಂಧಿಸಿದ ಧೃಢೀಕರಿಸಿದ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು ಹಾಗೂ ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಗಳನ್ನು, ಒಟ್ಟು ಪಡೆದ ಅಂಕಗಳನ್ನು ಮತ್ತು ಶೇಕಡಾವಾರು ಅಂಕಗಳನ್ನು ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸತಕ್ಕದ್ದು. OGPA/CGPA/Grade ಆದಲ್ಲಿ ಸಮಾನ ಶೇಕಡಾವಾರು (%) ಅಂಕಗಳನ್ನು ಕಡ್ಡಾಯವಾಗಿ ನಮೂದಿಸಬೇಕು.

8) ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಕರೆ ನೀಡುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು. ಲಿಖಿತ ಪರೀಕ್ಷೆಗೆ ದಿನಾಂಕ, ವೇಳೆ ಮತ್ತು ಸ್ಥಳದ ವಿವರಗಳನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.

9) ಅಭ್ಯರ್ಥಿಗಳಿಗೆ ಕನ್ನಡ ಭಾಷೆಯ ಜ್ಞಾನ (ಓದಲು ಮತ್ತು ಬರೆಯಲು) ಕಡ್ಡಾಯವಾಗಿರುತ್ತದೆ.

10) ಅರ್ಜಿ ಮೇಲ್ಭಾಗದಲ್ಲಿ ಇತ್ತೀಚಿನ ಪಾಸ್ ಪೋರ್ಟ್ ಅಳತೆಯ 1 ಭಾವಚಿತ್ರವನ್ನು ಅಂಟಿಸಿ ಅದರ ಮೇಲೆ ಅರ್ಜಿದಾರರು ಸಹಿ ಮಾಡತಕ್ಕದ್ದು. 2 ಭಾವಚಿತ್ರಗಳಿಗೆ ಹಿಂಭಾಗದಲ್ಲಿ ಸಹಿ ಮಾಡಿ ಅರ್ಜಿಯೊಂದಿಗೆ ಪ್ರತ್ಯೇಕ ಕವರ್‌ನಲ್ಲಿ ಹಾಕಿ ಲಗತ್ತಿಸತಕ್ಕದ್ದು.

11) ಅಭ್ಯರ್ಥಿಗಳು ಈಗಾಗಲೇ ಯಾವುದಾದರೂ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಲ್ಲಿ ಅಂತಹ ಸಂಸ್ಥೆಯ ಮುಖ್ಯಸ್ಥರ ಅನುಮತಿಯೊಂದಿಗೆ ಅರ್ಜಿ ಸಲ್ಲಿಸತಕ್ಕದ್ದು.

12) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಯಾವುದೇ ಕಾರಣವನ್ನು ನೀಡದೇ ರದ್ದುಗೊಳಿಸುವ ಅಥವಾ ಮುಂದೂಡುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.

13) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಅವಧಿಯವರೆಗೆ ಪರೀಕ್ಷಾರ್ಥ ಸೇವೆ ಸಲ್ಲಿಸಬೇಕು.

14) ನೇಮಕಾತಿ ಪ್ರಕ್ರಿಯೆಯು ಕರ್ನಾಟಕ ಸರ್ಕಾರವು ಕಾಲಕಾಲಕ್ಕೆ ನೀಡುವ ನಿರ್ದೇಶನಗಳು ಹಾಗೂ ಆದೇಶಕ್ಕೆ ಒಳಪಟ್ಟಿರುತ್ತದೆ.

15) ಪೂರ್ಣವಾಗಿ ಭರ್ತಿ ಮಾಡದೇ ಇರುವಂತಹ, ಧೃಢೀಕೃತ ದಾಖಲಾತಿಗಳೆಲ್ಲವನ್ನೂ ಲಗತ್ತಿಸದೇ ಇರುವಂತಹ, ಸಹಿ ಮಾಡದೇ ಇರುವಂತಹ ಹಾಗೂ ನಿಗದಿಪಡಿಸಿದ ದಿನಾಂಕದೊಳಗಾಗಿ ಬ್ಯಾಂಕಿಗೆ ತಲುಪಿಸದೇ ಇರುವಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

16) ಆಯ್ಕೆಯಾದ ಅಭ್ಯರ್ಥಿಗಳು ಬ್ಯಾಂಕಿನ ನೌಕರರ ಸೇವಾ ನಿಯಮಾನುಸಾರ ನಿಗದಿಪಡಿಸಿದ ಭದ್ರತಾ ಠೇವಣಿ ರೂ. 25,000-00 ಗಳನ್ನು ಹಾಗೂ ರೂ. 50,000-00 ಗಳ ಇಂಡೆಮ್ನಿಟಿ ಬಾಂಡನ್ನು ಸಲ್ಲಿಸಬೇಕು. ಹಾಗೂ ಕನಿಷ್ಟ 5 ವರ್ಷಗಳ ಅವಧಿಯವರೆಗೆ ಬ್ಯಾಂಕಿನಲ್ಲಿ ಸೇವೆ ಸಲ್ಲಿಸುವುದಾಗಿ ಮುಚ್ಚಳಿಕೆ ಪತ್ರವನ್ನು ಬ್ಯಾಂಕಿಗೆ ಸಲ್ಲಿಸಬೇಕು. ಇಲ್ಲವಾದಲ್ಲಿ ಭದ್ರತಾ ಠೇವಣಿಯನ್ನು ಬ್ಯಾಂಕಿಗೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

-- ಸಹಿ--

ಸದಸ್ಯ ಕಾರ್ಯದರ್ಶಿ ಹಾಗೂ
ಮುಖ್ಯ ಕಾರ್ಯನಿರ್ವಾಹಣಾಧಿಕಾರಿ,
ಹಾಸನ ಜಿಲ್ಲಾ ಸಹಕಾರ ಕೇಂದ್ರ
ಬ್ಯಾಂಕ್ ನಿ., ಹಾಸನ.

ಸ್ಥಳ: ಹಾಸನ
ದಿನಾಂಕ: 05-11-2018.